ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಉತ್ಪಾದಕ ಘಟಕಗಳ ಉತ್ಪಾದನಾ ಸಾಮರ್ಥ್ಯವನ್ನು ನಿರ್ಧರಿಸುವ ಬಗ್ಗೆ

೧೯೪೫. ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನಹಳ್ಳಿ).—ಮಾನ್ಯ ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಉತ್ಪಾದಕ ಘಟಕಗಳ ಉತ್ಪಾದನಾ ಸಾಮರ್ಥ್ಯವನ್ನು ನಿರ್ಧರಿಸಲು ಸರ್ಕಾರವು ಜಂಟಿ ವ್ಯವಸ್ಥಾಪಕ ನಿರ್ದೇಶಕರನ್ನು ನೇಮಕ ಮಾಡಿರುವ ವಿಷಯವು ನಿಜವೇ ?

ಆ) ನೇಮಕಗೊಂಡಿರುವ ಈ ಜಂಟಿ ವ್ಯವಸ್ಥಾಪಕ ನಿರ್ದೇಶಕರು, ಉತ್ಪಾದಕ ಘಟಕಗಳ ಉತ್ಪಾದನಾ ಸಾಮರ್ಥ್ಯದ ಬಗ್ಗೆ ತಪ್ಪು ವರದಿ ಸಲ್ಲಿಸಿರುವುದು ಮತ್ತು ಸರ್ಕಾರವನ್ನು ತಪ್ಪಾಗಿ ನಿರೂಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? ಜಂಟಿ ವ್ಯವಸ್ಥಾಪಕ ನಿರ್ದೇಶಕರ ವರದಿಯ ಪ್ರತಿಯನ್ನು ಸದನದಲ್ಲಿ ಮಂಡಿಸಬೇಕಾಗಿ ವಿನಂತಿ.

ಇ) ವರದಿಯು ಸತ್ಯಕ್ಕೆ ದೂರವಾಗಿದ್ದು ಈ ವಿಷಯವನ್ನು ಪರಿಶೀಲಿಸಿ ಜಂಟಿ ವ್ಯವಸ್ಥಾಪಕ ನಿರ್ದೇಶಕರ ಮಿಥ್ಯಾಕಥನ ಮತ್ತು ಉದ್ದೇಶಪೂರ್ವಕವಾಗಿ ತಪ್ಪು ಅಧಿಕಾರ ಉಪಯೋಗಿಸಿರುವುದಕ್ಕೆ ಸರ್ಕಾರವು ಅವರ ಮೇಲೆ ಕ್ರಮ ಕೈಗೊಂಡಿದೆಯೇ ?

ಶ್ರೀ ಬಿ. ಎ. ಜೀವಿಜಯ (ಅರಣ್ಯ ಮಂತ್ರಿಗಳು).—

ಅ) ಹೌದು.

ಆ) ಅವರಿಗೆ ತಿಳಿದ ಮಟ್ಟಿಗೆ ವರದಿ ಕೊಟ್ಟಿರುತ್ತಾರೆ. ಅದನ್ನು ಸುಳ್ಳು ವರದಿ ಎಂದು ಹೇಳಲಿಕ್ಕೆ ಬರುವುದಿಲ್ಲ. ವರದಿಯು ಸರ್ಕಾರದ ಪರಿಶೀಲನೆಯಲ್ಲಿದೆ. ಆದ್ದರಿಂದ ಸಧ್ಯಕ್ಕೆ ವರದಿಯನ್ನು ಸದನದ ಮುಂದೆ ಮಂಡಿಸುವ ಅಗತ್ಯವಿಲ್ಲ.

ಇ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಭದ್ರಾ ಮೇಲ್ದಂಡೆ ಯೋಜನೆಯನ್ನು ಕಾರ್ಯಗತಗೊಳಿಸುವ ಬಗ್ಗೆ

೬೦೫. ಬಿ. ಬಸವಲಿಂಗಪ್ಪ (ಯಲಹಂಕ).—ಮಾನ್ಯ ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಭದ್ರಾ ಮೇಲ್ದಂಡೆ ಯೋಜನೆಯನ್ನು ಕಾರ್ಯಗತಗೊಳಿಸಲು ಸಾರ್ವಜನಿಕ ಬೇಡಿಕೆ ಇರುವುದು ನಿಜವೇ ?

ಆ) ಹಾಗಿದ್ದಲ್ಲಿ ಸರ್ವೆ ಕಾರ್ಯ ಆಗಿದೆಯೆ ?

ಇ) ಈ ಯೋಜನೆಯಿಂದ ಅನುಕೂಲ ಪಡೆಯುವ ತಾಲ್ಲೂಕುಗಳ ಸಂಖ್ಯೆ ಎಷ್ಟು ?

ಈ) ಈ ಯೋಜನೆಯ ಅಂದಾಜು ವೆಚ್ಚವೆಷ್ಟು ?

ಶ್ರೀ ಹೆಚ್. ಡಿ. ದೇವೇಗೌಡ (ಲೋಕೋಪಯೋಗಿ ಮತ್ತು ನೀರಾವರಿ ಮಂತ್ರಿಗಳು).—

ಅ) ಹೌದು.

ಆ) ಯೋಜನೆಯ ಇನ್ನೂ ಅನ್ವೇಷಣೆ ಹಂತದಲ್ಲಿದೆ.

ಇ) ಮತ್ತು ಈ) ಅನ್ವೇಷಣೆ ಕಾರ್ಯ ಮುಗಿದು ಯೋಜನಾ ವರದಿ ತಯಾರಾದ ನಂತರ ಈ ವಿವರಗಳು ತಿಳಿಯಲ್ಪಡುವುದು.